2) ಇಲ್ಲ.

3) ಅನ್ವಯಿಸುವುದಿಲ್ಲ.

ಭೂ ಪರಿವರ್ತನೆ ಅಧಿಕಾರ

103 (168)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭೂ ಪರಿವರ್ತನೆಯ ಪ್ರಸ್ತಾವನೆಗಳು ಜಿಲ್ಲಾಮಟ್ಟದಿಂದ ರಾಜಧಾನಿಯಲ್ಲಿರುವ ನಗರ ಯೋಜನಾ ಇಲಾಖೆಯ ಅನುಮೋದನೆಗೆ ಬರಬೇಕಾಗಿರುವುದು ನಿಜವೇ?

ಆ) ಹಾಗಿದ್ದಲ್ಲಿ ಈ ವ್ಯವಸ್ಥೆಯಿಂದ ಬಹಳಷ್ಟು ಕಾಲ ವ್ಯಯವಾಗಿ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಇ) ಹಾಗಿದ್ದಲ್ಲಿ 0.05 ಸೆಂಟ್ ನಿಂದ 0.10 ಸೆಂಟ್ಸ್ ವಿಸ್ತೀರ್ಣದ ಭೂ ಪರಿವರ್ತನೆಯ ಅಧಿಕಾರವನ್ನು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ನೀಡಲು ಸರ್ಕಾರದವರು ಪರಿಶೀಲಿಸುವರೆ?

ಶ್ರೀ ಬಿ.ಎನ್.ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ) ಭೂ (ಉಪಯೋಗ) ಪರಿವರ್ತನೆ ಪ್ರಕ್ರಿಯೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕರಣ 14 (ಎ) ರಡಿ ಜಾರಿಗೊಳಿಸುವುದರಿಂದ ಕೆಲವು ಸಂದರ್ಭಗಳಲ್ಲಿ ವಿಳಂಬವಾಗುವುದು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಭೂ ಉಪಯೋಗ ಪರಿವರ್ತನೆ ಪ್ರಸ್ತಾವನೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮ ಯೋಜನಾ ಅಧಿನಿಯಮ 1961ರಡಿಯಲ್ಲಿ ಅಂಗೀಕರಿಸುವ ಅಧಿಕಾರ ಸರ್ಕಾರಕ್ಕೆ ಮಾತ್ರ ಇರುವುದರಿಂದ ಈ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ನೀಡಲು ಅವಕಾಶವಿರುವುದಿಲ್ಲ.

ಪೌರಾಡಳಿತ ನಿರ್ದೇಶನಾಲಯದಲ್ಲಿರುವ ಖಾಲಿ ಹುದ್ದೆಗಳ ಭರ್ತಿ

104 (169)